All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

24.02.2026 6.40 p.m.

***************

ಮುಖ್ಯಾಂಶಗಳು

- ಕಾಲಮಿತಿಯೊಳಗೆ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ
- ರಾಜ್ಯದಲ್ಲಿ ೧ ಸಾವಿರದ ೭೦೦ ಅಗ್ನಿಶಾಮಕ ಹುದ್ದೆಗಳ ಭರ್ತಿಗೆ ಕ್ರಮ ಗೃಹ ಸಚಿವ ಡಾ.ಜಿ.ಪರಮೇಶ್ವರ್
- ಸ್ವಯಂ ಚಾಲಿತ ಮ್ಯುಟೇಷನ್ ಮೂಲಕ ಜನರ ಮನೆ ಬಾಗಿಲಿಗೆ ಆಡಳಿತ- ಕಂದಾಯ ಸಚಿವ ಕೃಷ್ಣ ಬೈರೇಗೌಡ
- ಸಣ್ಣ ಕೈಗಾರಿಕೋದ್ಯಮಿಗಳಿಗೆ ರಾಜ್ಯ ಸರ್ಕಾರದಿಂದ ಸೂಕ್ತ ನೆರವು - ಆಹಾರ ಸಚಿವ ಕೆ.ಎಚ್.ಮುನಿಯಪ್ಪ

***************

ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಪಾರದರ್ಶಕ ಹಾಗೂ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳು ನಡೆಸುತ್ತಿರುವ ಪ್ರತಿಭಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ, ಅಭ್ಯರ್ಥಿಗಳ ಹಿತರಕ್ಷಣೆಗಾಗಿ ನೇಮಕಾತಿ ವಯೋಮಿತಿಯನ್ನು ೫ ವರ್ಷಗಳವರೆಗೆ ಸಡಿಲಗೊಳಿಸಲಾಗಿದ್ದು, ಮುಂಬರುವ ವರ್ಷಗಳಲ್ಲಿ ಹೆಚ್ಚಿನ ಹುದ್ದೆಗಳ ನೇಮಕಾತಿಗಾಗಿ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಈ ಕುರಿತು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಅವರು, ಒಳಮೀಸಲಾತಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣಗಳು ನಡೆಯುತ್ತಿದ್ದ ಕಾರಣದಿಂದ ಹಲವು ನೇಮಕಾತಿ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು ಎಂದು ಸ್ಪಷ್ಟನೆ ನೀಡಿದ್ದಾರೆ.

***************

ರಾಜ್ಯದಲ್ಲಿ ೧ ಸಾವಿರದ ೬೦೦ ಅಗ್ನಿಶಾಮಕ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವಾ ಇಲಾಖೆ, ಗೃಹರಕ್ಷಕ ದಳ, ಪೌರರಕ್ಷಣೆ ಮತ್ತು ಎಸ್‌ಡಿಆರ್‌ಎಫ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ 'ಮುಖ್ಯಮಂತ್ರಿಗಳ ಪದಕ' ಪ್ರದಾನ ಮಾಡಿ ಮಾತನಾಡಿದ ಸಚಿವರು, ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆ, ಉತ್ತಮ ಕೆಲಸದ ಮೂಲಕ ರಾಷ್ಟ್ರ ಮಟ್ಟದಲ್ಲಿ ಜನಮನ್ನಣೆ ಪಡೆದಿದೆ ಎಂದರು.

ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯಲ್ಲಿ ೧ ಸಾವಿರದ ೬೦೦ಕ್ಕೂ ಹೆಚ್ಚು ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಬೇಕಿದೆ. ಈ ಬಗ್ಗೆ ಮುಖ್ಯಮಂತ್ರಿಯವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

೧೫ ಹೊಸ ತಾಲ್ಲೂಕುಗಳಲ್ಲಿ ಅಗ್ನಿಶಾಮಕ ಠಾಣೆಗಳ ನಿರ್ಮಾಣಕ್ಕೆ ಮುಖ್ಯಮಂತ್ರಿ ಬಳಿ ಮನವಿ ಮಾಡಲಾಗಿದೆ. ಪೊಲೀಸ್ ಗೃಹ ಮಾದರಿಯಂತೆ ಅಗ್ನಿಶಾಮಕ ಸಿಬ್ಬಂದಿಗೆ ವಸತಿ ಗೃಹ ಕಲ್ಪಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

***************

ರಾಜ್ಯಾದ್ಯಂತ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುತ್ತಿದ್ದು, ರಾಜ್ಯ ಸರ್ಕಾರ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದ್ದಾರೆ.

ಧಾರವಾಡ ಆಯೋಜಿಸಿದ್ದ ಜಿಲ್ಲಾ ಮಟ್ಟದ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಉದ್ಯೋಗ ಮೇಳಕ್ಕೆ ಯುವಜನತೆಯಿಂದ ಉತ್ತಮ ಸ್ಪಂದನೆ ಸಿಗುತ್ತಿದೆ. ಉದ್ಯೋಗಾಕಾಂಕ್ಷಿಗಳಿಗೆ ನೇರವಾಗಿ ಉದ್ಯೋಗದಾತರನ್ನು ಭೇಟಿ ಮಾಡುವ ಅವಕಾಶ ಕಲ್ಪಿಸುವುದು ಉದ್ಯೋಗ ಮೇಳದ ಮುಖ್ಯ ಉದ್ದೇಶವಾಗಿದೆ ಎಂದರು.

ರಾಜ್ಯ ಸರ್ಕಾರದಿಂದ ಈಗಾಗಲೇ ೪೦ ಸಾವಿರಕ್ಕೂ ಹೆಚ್ಚು ಉದ್ಯೋಗ ನೀಡಲಾಗಿದೆ ಹಾಗೂ ೫೬ ಸಾವಿರ ಹೊಸ ಹುದ್ದೆಗಳ ನೇಮಕಾತಿಗೆ ತೀರ್ಮಾನಿಸಲಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಕಡಿಮೆ ಮಾಡುವ ನಿಟ್ಟಿನಲ್ಲಿ ಸರ್ಕಾರ ನಿರಂತರವಾಗಿ ಪ್ರಯತ್ನಿಸುತ್ತಿದ್ದು, ಯುವಕರು ಈ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಚಿವ ಸಂತೋಷ ಲಾಡ್ ಕರೆ ನೀಡಿದರು.

***************

ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಕಾಸಸೌಧದಲ್ಲಿಂದು ಸ್ವಯಂ ಚಾಲಿತ ಮ್ಯುಟೇಷನ್‌ಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಸ್ವಯಂ ಚಾಲಿತ ಮ್ಯುಟೇಷನ್ ಮೂಲಕ ಜನರ ಮನೆ ಬಾಗಿಲಿಗೆ ಆಡಳಿತ ತಲುಪಿಸುವ ಸರ್ಕಾರದ ಉದ್ದೇಶವಾಗಿದೆ. “ಕಂದಾಯ ಇಲಾಖೆಯನ್ನು ಜನಪರಗೊಳಿಸಬೇಕು, ಆಡಳಿತದಲ್ಲಿ ಸುಧಾರಣೆ ಮತ್ತು ಸರಳೀಕರಣ ನಿಟ್ಟಿನಲ್ಲಿ ಕಳೆದ ಎರಡೂವರೆ ವರ್ಷದಿಂದ ಹಲವಾರು ಬದಲಾವಣೆಗಳನ್ನು ತರಲಾಗುತ್ತಿದೆ ಎಂದರು.

ಸ್ವಯಂ ಚಾಲಿತ ಮ್ಯುಟೇಷನ್ ಸೇವೆಯನ್ನು ಒಂದು ತಿಂಗಳಿನಿಂದ ಮಂಡ್ಯದಲ್ಲಿ ಅನುಷ್ಠಾನಗೊಳಿಸಿ ಸಾಧಕ-ಬಾಧಕ ಪರಿಶೀಲಿಸಿ ಇಂದಿನಿಂದ ಶೇಕಡಾ ೯೮ ರಷ್ಟು ಎಲ್ಲಾ ಖಾತೆ ಬದಲಾವಣೆಗಳೂ ಸ್ವಯಂ ಚಾಲಿತಗೊಳ್ಳಲು ಮುನ್ನುಡಿ ಇಟ್ಟಿದ್ದೇವೆ ಎಂದು ತಿಳಿಸಿದರು.

ಆನ್ಲೈನ್ ಮೂಲಕ ಖಾತೆ ಬದಲಾವಣೆಗೆ ಮನವಿ ಸಲ್ಲಿಸಿದರೆ, ೭ ದಿನ ನೋಟೀಸ್ ಅವಧಿ ಇರುತ್ತದೆ. ಈ ಅವಧಿಯಲ್ಲಿ ಯಾರು ಬೇಕಾದರೂ ತಕರಾರು ಸಲ್ಲಿಸಬಹುದು ಎಂದು ಹೇಳಿದರು.

ನಕಲಿ ವಹಿವಾಟು ತಪ್ಪಿಸಿ ಆಸ್ತಿ ಮಾಲೀಕತ್ವವನ್ನು ಮತ್ತಷ್ಟು ಸುಭದ್ರಗೊಳಿಸಲು ಸಾರ್ವಜನಿಕರು ತಮ್ಮ ಪಹಣಿಯ ಜೊತೆಗೆ ಆಧಾರ್ ಜೋಡಣೆಗೊಳಿಸಬೇಕು ಎಂದು ಸಚಿವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

***************

ಶಿವಮೊಗ್ಗದಲ್ಲಿ ಇದೇ ೨೭ ರಂದು ೧೦ ಕಿಲೋವ್ಯಾಟ್‌ನ ನೂತನ ಎಫ್‌ಎಂ ಪ್ರೇಷಕ ಕೇಂದ್ರದ ಉದ್ಘಾಟನಾ ಸಮಾರಂಭ ಜರುಗಲಿದೆ.

ಆಕಾಶವಾಣಿ ಪ್ರಸಾರ ಭಾರತಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳಲಿದ್ದಾರೆ.

ಸಂಸದ ಬಿ.ವೈ.ರಾಘವೇಂದ್ರ, ರಾಜ್ಯ ಸಾಕ್ಷರತಾ ಮತ್ತು ಶಿಕ್ಷಣ ಸಚಿವ ಮಧುಬಂಗಾರಪ್ಪ, ಶಾಸಕರಾದ ಬಿ.ಕೆ.ಸಂಗಮೇಶ್ವರ್, ಗೋಪಾಲಕೃಷ್ಣ ಬೇಳೂರು, ಅರಗ ಜ್ಞಾನೇಂದ್ರ, ಚನ್ನಬಸಪ್ಪ, ಶಾರದಾ ಪೂರ್ಯ ನಾಯ್ಕ್, ಪ್ರಸಾರ ಭಾರತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗೌರವ್ ದ್ವಿವೇದಿ ಮತ್ತಿತರರು ಸಮಾರಂಭದಲ್ಲಿ ಉಪಸ್ಥಿತರಿರುವರು.

***************

ರಾಜ್ಯ ಸರ್ಕಾರ ಸಣ್ಣ ಕೈಗಾರಿಕೋದ್ಯಮಿಗಳಿಗೆ ನೆರವು ನೀಡುತ್ತಿದ್ದು, ಅಧಿಕಾರಿಗಳು ಮಾರುಕಟ್ಟೆ ಮತ್ತು ಸಣ್ಣ ಕೈಗಾರಿಕೋದ್ಯಮಿಗಳ ನಡುವೆ ಸಂಪರ್ಕ ಸೇತುವೆಯಂತೆ ಕಾರ್ಯ ನಿರ್ವಹಿಸಬೇಕಿದೆ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಸೂಚಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ದೇವನಹಳ್ಳಿಯಲ್ಲಿ ಆಯೋಜಿಸಿದ್ದ ಪಿ.ಎಂ.ವಿಶ್ವಕರ್ಮ ಪ್ರದರ್ಶನ ಮತ್ತು ಮಾರಾಟ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ಕುಶಲ ಕರ್ಮಿಗಳ ವಸ್ತುಗಳಿಗೆ ಸೂಕ್ತ ಮಾರುಕಟ್ಟೆಗೆ ವ್ಯವಸ್ಥೆ ಕಲ್ಪಿಸಬೇಕಿದ್ದು, ಕುಶಲ ಕೈಗಾರಿಕೋದ್ಯಮಿಗಳಿಗೆ ಸಾಲ ಸೌಲಭ್ಯ ಒದಗಿಸಬೇಕಿದೆ ಎಂದರು.

ಪಿ.ಎಂ.ಕಿಸಾನ್ ಯೋಜನೆಯ ಫಲಾನುಭವಿಗಳಿಗೆ ಸಹಾಯಧನ ನೀಡುವ ಮೂಲಕ ಅವರನ್ನು ಸ್ವಾವಲಂಭಿಗಳನ್ನಾಗಿ ಮಾಡಬೇಕಿದೆ. ಪಿ.ಎಂ. ಕಿಸಾನ್ ಯೋಜನೆಗೆ ಕೇಂದ್ರ ಸರ್ಕಾರ ಹೆಚ್ಚಿನ ಸೌಲಭ್ಯ ನೀಡುತ್ತಿದ್ದು, ಇದರ ಸದುಪಯೋಗವಾಗಬೇಕು ಎಂದು ತಿಳಿಸಿದರು.

****************

ಇದೇ ೨೬ರಂದು ಬೆಂಗಳೂರಿನ ಸ್ಕೌಟ್ಸ್ ಮತ್ತು ಗೈಡ್ಸ್ ಸಭಾಂಗಣದಲ್ಲಿ ಕರ್ನಾಟಕದ ಎಲ್ಲ ಜಿಲ್ಲಾ ತಂಡಗಳಿಗೆ ಪ್ರಶಿಕ್ಷಣ ಕಾರ್ಯಾಗಾರ ನಡೆಯಲಿದೆ ಎಂದು ಪ್ರಶಿಕ್ಷಣ ಅಭಿಯಾನದ ರಾಜ್ಯ ಸಂಚಾಲಕ ಮತ್ತು ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಅವರು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಅವರ ನೇತೃತ್ವದಲ್ಲಿ ನಡೆಯಲಿರುವ ಈ ಕಾರ್ಯಾಗಾರಕ್ಕೆ ರಾಜ್ಯದ ಪ್ರತಿ ಪ್ರಶಿಕ್ಷಣ ಜಿಲ್ಲೆಯಿಂದ ತಂಡವನ್ನು ನಿಯೋಜಿಸಲಾಗಿದೆ ಎಂದು ಹೇಳಿದರು.

ಸಂಘಟನೆಯಿಂದ ರಾಷ್ಟ್ರ ನಿರ್ಮಾಣ ಪ್ರಶಿಕ್ಷಣದ ಮುಖ್ಯ ಗುರಿಯಾಗಿದ್ದು, ಕಾರ್ಯಕರ್ತರಲ್ಲಿ ವೈಚಾರಿಕ ಬದ್ಧತೆ ಬೆಳೆಸುವುದು ಕಾರ್ಯಾಗಾರದ ಉದ್ದೇಶವಾಗಿದೆ ಎಂದು ತಿಳಿಸಿದರು.

****************

ಯುವಜನತೆಗೆ ಉದ್ಯೋಗ ಮಾರುಕಟ್ಟೆಗೆ ಪೂರಕವಾದ ಕೌಶಲ್ಯ ತರಬೇತಿ ನೀಡುವುದು ಅಗತ್ಯವಾಗಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದ್ದಾರೆ.

ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಒಟ್ಟು ೧೭ ಸಾವಿರದ ೭೧೫ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿದ್ದು, ತರಬೇತಿ ಪಡೆದವರ ಪೈಕಿ ಈಗಾಗಲೇ ೨ ಸಾವಿರದ ೩೭೬ ಅಭ್ಯರ್ಥಿಗಳು ವಿವಿಧ ಸಂಸ್ಥೆಗಳಲ್ಲಿ ಉದ್ಯೋಗ ಪಡೆದುಕೊಂಡಿದ್ದಾರೆ ಎಂದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ೧೦ ಸಾವಿರದ ೪೦೪ ಪದವೀಧರರು ಹಾಗೂ ೨೨೮ ಡಿಪ್ಲೋಮಾ ಅಭ್ಯರ್ಥಿಗಳು ಸೌಲಭ್ಯ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

****************

ಧಾರವಾಡ ನಗರದ ಕೆಸಿಡಿ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿರುವ ಧಾರವಾಡ ಲೋಕಸಭಾ ಕ್ಷೇತ್ರದ ಪ್ರತಿಷ್ಠಿತ 'ಸಂಸದ್ ಕ್ರೀಡಾ ಮಹೋತ್ಸವ'ದ ಪೂರ್ವಸಿದ್ಧತೆಗಳಿಗೆ ಇಂದು ಅಧಿಕೃತವಾಗಿ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಮತ್ತಿತರರು ಉಪಸ್ಥಿತರಿದ್ದರು.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾಹಿತಿ ಹಂಚಿಕೊಂಡಿದ್ದು, ಸಾಮಾಜಿಕ "ಕ್ರೀಡಾಪಟುಗಳಿಗೆ ಪೂರಕವಾದ ಮೂಲಸೌಕರ್ಯ, ಮೈದಾನದ ಸ್ವಚ್ಛತೆ, ಕುಡಿಯುವ ನೀರು ಹಾಗೂ ಗುಣಮಟ್ಟದ ಕ್ರೀಡಾ ಪರಿಕರಗಳ ಲಭ್ಯತೆಯ ಬಗ್ಗೆ ವಿಶೇಷ ಗಮನ ಹರಿಸಲಾಗುತ್ತಿದೆ. ಇನ್ನು ಕೆಲವೇ ದಿನಗಳಲ್ಲಿ ಇಡೀ ಕ್ರೀಡಾಂಗಣವು ಕ್ರೀಡಾ ಸಂಭ್ರಮಕ್ಕೆ ಸಂಪೂರ್ಣವಾಗಿ ಸಜ್ಜಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

****************

ರಾಜ್ಯದಾದ್ಯಂತ ಇದೇ ೨೮ರಿಂದ ಮಾರ್ಚ್ ೧೭ರ ವರೆಗೆ ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯಲಿದ್ದು, ಹಾವೇರಿ ಜಿಲ್ಲೆಯಲ್ಲಿ ಸಿದ್ದತಾ ಕಾರ್ಯಗಳನ್ನು ಮಾಡಿಕೊಳ್ಳಲಾಗುತ್ತಿದೆ. ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ೨೫ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿದ್ದು, ಒಟ್ಟು ೧೪ ಸಾವಿರದ ೨೮೪ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆ ಜರುಗದಂತೆ ಎಚ್ಚರಿಕೆ ವಹಿಸಲಾಗುತ್ತದೆ. ಪರೀಕ್ಷಾ ಕೇಂದ್ರಗಳ ಸುತ್ತ ೨೦೦ ಮೀಟರ್‌ವರೆಗೆ ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ ಎಂದು ತಿಳಿಸಿದ್ದಾರೆ.

********ಮುಕ್ತಾಯ********